**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,**
**ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)**
**ವಾರ್ಡ್ ಸಮಿತಿ ಸಭೆ, ದಿನಾಂಕ:24-12-2021 ರ ಸಭಾ ನಡವಳಿ**

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/25/21-22

ದಿನಾಂಕ: 24-12-2021 ರಂದು ಮಧ್ಯಾಹ್ನ 12.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri. Madhu | Junior Health Inspector |
| 4. | Sri Nagaraj | Tax Inspector |
| 5. | Sri Venkatesh | Horticulture Inspector |
| 6. | Sri Mohammed Ibrahim | Water Inspector BWSSB |
| 7. | Sri. Kodhanda Rama | BESCOM |
| 8. | Sri.Mahesh Kumar. M | Sanitary Dhafedhar |
| 9. | Sri Suresh | Ward Committee Member |
| 10. | Sri Syed Ansar Pasha | Ward Committee Member |
| 11. | Sri.Suraj Advocate | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 09-12-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ವಾರ್ಡ್ ನಂ.47, ಹೊಸ ರಸ್ತೆ, ಮೋದಿಗಾರ್ಡನ್, ಬೆಂಗಳೂರು ಇಲ್ಲಿನ ರಸ್ತೆಯ ಬದಿಯಲ್ಲಿರುವ [illegible] ಗಿಡಗಳನ್ನು ಶುಚಿಗೊಳಿಸುವ ಬಗ್ಗೆ ಶ್ರೀ.ಸೂರಜ್ ರವರು ಕೋರಿದ್ದು, ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷರಾದ ಶ್ರೀ.ಮಧು ರವರಿಗೆ ಕ್ರಮಕೈಗೊಳ್ಳಲು ಸಭೆಯಲ್ಲಿ ಸೂಚಿಸಲಾಗಿರುತ್ತದೆ.
2. 1ನೇ ಕ್ರಾಸ್ ಮೋದಿ ಗಾರ್ಡನ್ ಬೆಂಗಳೂರು ರಲ್ಲಿ ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಅಳವಡಿಸಿಕೊಡುವ ಬಗ್ಗೆ ಶ್ರೀ.ಸೂರಜ್ ರವರು ಕೋರಿದ್ದು, ಸಂಬಂಧಪಟ್ಟ ಸಹಾಯಕ ಅಭಿಯಂತರರಿಗೆ ಅಂದಾಜುಪಟ್ಟಿ ತಯಾರಿಸಿ ಪ್ರಸ್ತಾವನೆಯನ್ನು ಮಂಜೂರಾತಿಗೆ ಸಲ್ಲಿಸಲು ಸೂಚಿಸಲಾಗಿರುತ್ತದೆ.
3. ಘನತ್ಯಾಜ್ಯ ರವಾನೆ ಮಾಡುವ ಸಂದರ್ಭದಲ್ಲಿ ಆಟೋ ಟಿಪ್ಪರ್ ವಾಹನದ ಹಿಂಬಾಗ ಘನತ್ಯಾಜ್ಯವನ್ನು ಮೂಟೆಗಳಲ್ಲಿ ನೇತು ಹಾಕಿಕೊಂಡು, ಇದರಿಂದಾಗಿ ಅಲ್ಲಲ್ಲಿ ರಸ್ತೆಯ ಮಧ್ಯಬಾಗದಲ್ಲಿ ಘನತ್ಯಾಜ್ಯವು ಆಟೋ ಟಿಪ್ಪರ್‌ನಿಂದ ಕೆಳಗೆ ಬೀಳುತ್ತಿರುವುದಲ್ಲದೆ, ರಸ್ತೆಯಲ್ಲಿ ಓಡಾಡುವ ವಾಹನಗಳ ಮೇಲೆ ಹಾಗೂ ಮನುಷ್ಯರ ಮೇಲೆ ಬೀಳುತ್ತಿದ್ದು, ಇದರಿಂದಾಗಿ ದುರ್ವಾಸನೆ ಬರುತ್ತಿದ್ದು, ಸದರಿ ಘನತ್ಯಾಜ್ಯ ರವಾನೆಯ ಸಂದರ್ಭದಲ್ಲಿ ಆಟೋ ಟಿಪ್ಪರ್‌ಗಳ ಮೇಲ್ಬಾಗದಲ್ಲಿ ಮುಚ್ಚಳವನ್ನು ಹಾಕಿ ಸಮರ್ಪಕವಾಗಿ ಕಸ ವಿಲೇವಾರಿ ಮಾಡುವ ಬಗ್ಗೆ ಶ್ರೀ.ಸೂರಜ್ ರವರು ಸಭೆಯಲ್ಲಿ ದೂರಿನ ಪತ್ರ ನೀಡಿರುತ್ತಾರೆ.

ಸಹಿ
(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)

Scanned with CamScanner

ಪ್ರತಿಯನ್ನು:

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
14 ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

Scanned with CamScanner